# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರ ಕಛೇರಿ ಕೆಂಪೇಗೌಡನಗರ ಉಪವಿಭಾಗ,**

**ಬೃ.ಬೆಂ.ಮ.ಪಾಲಿಕೆ ಹೆಚ್. ಸಿದ್ದಯ್ಯ ರಸ್ತೆ, ಬೆಂಗಳೂರು**

ಸಂಖ್ಯೆ:ಸ.ಇಂ/ವಾ–118/ವಾರ್ಡ್‌ಸಭೆ/2022–23 ದಿನಾಂಕ:

## ವಾರ್ಡ್ –118ರ ವಾರ್ಡ್ ಸಭೆಯ ನಡವಳಿ

ದಿನಾಂಕ:10–05–2022 ರಂದು ಕೆಂಪೇಗೌಡನಗರ ಉಪವಿಭಾಗ ವಾರ್ಡ್–118ರ ವಾರ್ಡ್ ಕಛೇರಿಯಲ್ಲಿ ಡಾ!!. ಚಂದ್ರಯ್ಯ.ಟಿ. ಉಪ ನಿರ್ದೇಶಕರು ಪಶುಪಾಲನೆ ವಾರ್ಡ್–118 ರ ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭಾ ನಡವಳಿಗಳು.

ಹಾಜರಿದವರು:–

| ಕ್ರ ಸಂ. | ಹೆಸರು | ಹುದ್ದೆ | ಮೊಬೈಲ್ ಸಂಖ್ಯೆ |
|---|---|---|---|
| 1 | ಡಾ!!. ಚಂದ್ರಯ್ಯ.ಟಿ. | ನೋಡಲ್ ಅಧಿಕಾರಿಗಳು | 9902041310 |
| 2 | ಶ್ರೀ.ಕೆ.ಎಸ್.ವಿಜಯ್‌ಕುಮಾರ್ | ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರು ವಾರ್ಡ್ ಸಂಖ್ಯೆ:118 | 9480688118 |
| 3 | ಶ್ರೀ.ಆರ್.ವೀರಯ್ಯ | ಕಿರಿಯ ಆರೋಗ್ಯ ಪರಿವೀಕ್ಷಕರು | 9844859560 |
| 4 | ಶ್ರೀ.ಎಂ. ಸುರೇಂದ್ರ | ಸಹಾ ಕಂದಾಯ ಅಧಿಕಾರಿ(ಮಾರುಕಟ್ಟೆ) ಟಿ.ಐ | |
| 5 | ಶ್ರೀ.ಎ.ರಮೇಶ್ | ಸ್ಥಳೀಯರು | 9449220317 |
| 6 | ಶ್ರೀ.ಎ.ಜಾಕ್ | ಸ್ಥಳೀಯರು | |

ಮಾನ್ಯ ಅಧ್ಯಕ್ಷರು, ಮೇಲ್ಕಂಡ ಎಲ್ಲರನ್ನು ಸ್ವಾಗತದೊಂದಿಗೆ ಪರಸ್ಪರ ಪರಿಚಯ ಮಾಡಿಕೊಳ್ಳಲು ತಿಳಿಸುತ್ತಾ ಸಭೆಯನ್ನು ಪ್ರಾರಂಭಿಸಲಾಯಿತು.

**ಚರ್ಚಿಸಲಾದ ವಿಷಯಗಳು:–**

**1. ಘನತ್ಯಾಜ್ಯ ವಿಭಾಗ:–**

ಘನತ್ಯಾಜ್ಯ ವಿಷಯವಾಗಿ ಮಾತನಾಡಿ, ವಿನೋಭನಗರ ಸುತ್ತಮುತ್ತಲಿನಲ್ಲಿ ಘನತ್ಯಾಜ್ಯವನ್ನು ತೆರವುಗೊಳಿಸಬೇಕೆಂದು ಸಭೆಯಲ್ಲಿ ಕೋರಿರುತ್ತಾರೆ.

## 2. ಆರೋಗ್ಯ ಇಲಾಖೆ

ಸ್ಥಳೀಯರ ಶ್ರೀನಿವಾಸ ರವರು ಮಾತನಾಡಿ, Fogging and Spraying ಸರಿಯಾಗಿ ನಿರ್ವಹಿಸುತ್ತಿರುವುದಿಲ್ಲವೆಂದು ಸಭೆಯಲ್ಲಿ ತಿಳಿಸುತ್ತಾ ಹಾಗೂ ಹೆರಿಗೆ ಆಸ್ಪತ್ರೆಯ ಒಳಗೆ ಸ್ವಚ್ಛತೆಯನ್ನು ಕಾಪಾಡಬೇಕೆಂದು ಸಭೆಯಲ್ಲಿ ತಿಳಿಸಿರುತ್ತಾರೆ.

## 3. ಕಾಮಗಾರಿ ಇಲಾಖೆ

ಕಾಮಗಾರಿ ವಿಷಯವಾಗಿ ಚರ್ಚಿಸಲಾಗಿ ಸ್ಥಳೀಯರು ವಿನೋಭನಗರ 1ನೇ, 2ನೇ, 3ನೇ ಅಡ್ಡರಸ್ತೆಗಳಿಗೆ ಕಾಂಕ್ರೀಟ್ ಹಾಕಬೇಕೆಂದು ಕೋರಿರುತ್ತಾರೆ. ವಿನೋಭನಗರದಲ್ಲಿ ಕಾಂಕ್ರೀಟ್‌ನಿಂದ ಮುಚ್ಚಿ ಹೋಗಿರುವ ಬೋರ್‌ವೆಲ್ ಅನ್ನು ತೆಗೆದು ದುರಸ್ಥಿಗೊಳಿಸಬೇಕೆಂದು ಸಭೆಯಲ್ಲಿ ಕೋರಿರುತ್ತಾರೆ. ಹಾಗೂ ನಾಲಾ ರಸ್ತೆ ಹಾಗೂ ಸಿದ್ದಯ್ಯ ರಸ್ತೆಯಲ್ಲಿ ರಸ್ತೆ ಮೂಲಭೂತ ಸೌಕರ್ಯ ರವರು ಕಾಮಗಾರಿ ನಿರ್ವಹಿಸುವ ಸಮಯದಲ್ಲಿ ಬೋರ್‌ವೆಲ್ ಮುಚ್ಚು ಹಾಕಿರುವುದಾಗಿ ತಿಳಿಸಿರುತ್ತಾರೆ.

## 4. ಬೆಂಗಳೂರು ನೀರು ಸರಬರಾಜು ಮಂಡಳಿ

ಮುಂದುವರೆದು ಸ್ಥಳೀಯರವರು ಮಾತನಾಡಿ ವಿನೋಭನಗರ ಮುಖ್ಯರಸ್ತೆಯಲ್ಲಿ ನೂತನವಾಗಿ ಒಳಚರಂಡಿ ಕೊಳವೆಗಳನ್ನು ಅಳವಡಿಸಬೇಕೆಂದು ಸಭೆಯಲ್ಲಿ ಕೋರಿರುತ್ತಾರೆ. ಹಾಗು ಮ್ಯಾನ್‌ಹೋಲ್‌ಗಳನ್ನು ನೂತನವಾಗಿ ನಿರ್ಮಿಸಬೇಕೆಂದು ಸಭೆಯಲ್ಲಿ ಕೋರಿರುತ್ತಾರೆ.

## 5. ಪೋಲೀಸ್ ಇಲಾಖೆ

ಸ್ಥಳೀಯರು ಮಾತನಾಡಿ ಸಿದ್ದಯ್ಯರಸ್ತೆ, ದೊಡ್ಡಮಾವಳ್ಳಿ ಹಾಗೂ ರೆಫರಲ್ ಆಸ್ಪತ್ರೆಯ ಸುತ್ತಮುತ್ತಲಿನ ರಸ್ತೆಯಲ್ಲಿ ಗಾಡಿಗಳನ್ನು ನಿಲ್ಲಿಸಿ, ಜಾಗದಲ್ಲಿ ಗಾಡಿಗಳನ್ನು ನಿಲ್ಲಿಸುತ್ತಿರುವುದರಿಂದ ಬಾರಿ ತೊಂದರೆ ಉಂಟಾಗಿತ್ತಿದ್ದು, ಹಾಗೂ ಗಾಡಿಗಳನ್ನು ರಸ್ತೆಯಲ್ಲಿಯೇ ರಿಪೇರಿ ಮಾಡುತ್ತಿರುವುದರಿಂದ ಜನ ಸಾಮಾನ್ಯರಿಗೆ ತುಂಬಾ ತೊಂದರೆ ಉಂಟಾಗಿರುತ್ತದೆ ಎಂದು ಸಭೆಯಲ್ಲಿ ತಿಳಿಸಿರುತ್ತಾರೆ.

ಅಂತಿಮವಾಗಿ ಅಧ್ಯಕ್ಷರು ಮಾತನಾಡಿ ಮುಂದಿನ ಸಭೆಗೆ ಕಡ್ಡಾಯವಾಗಿ ಎಲ್ಲಾ ಅಧಿಕಾರಿಗಳಿಗೆ ವಾರ್ಡ್ ಸಮಿತಿ ಸಭೆಗೆ ಸಮಯಕ್ಕೆ ಸರಿಯಾಗಿ ಹಾಜರಾಗುವಂತೆ ಸೂಚಿಸಿರುತ್ತಾರೆ, ಹಾಜರಿದ್ದ ಅಧಿಕಾರಿಗಳಿಗೆ ಸಮನ್ವಯ ಸಾಧಿಸಿಕೊಂಡು ಸಕಾಲದಲ್ಲಿ ಸಾರ್ವಜನಿಕರ ಕುಂದುಕೊರತೆಗಳಿಗೆ ಸ್ಪಂದಿಸಿ ಪರಿಹರಿಸಲು ಸಹಕಾರ ನೀಡುವಂತೆ ಕೋರುತ್ತಾ, ಸಭೆಗೆ ಹಾಜರಿದ್ದ ಎಲ್ಲಾರಿಗೂ ವಂದನೆಗಳನ್ನು ಅರ್ಪಿಸುತ್ತಾ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿಗಳು ಹಾಗೂ
ಸಹಾಯಕ ಅಭಿಯಂತರರು
ವಾರ್ಡ್ –118 ಸುಧಾಮನಗರ

ನೋಡಲ್ ಅಧಿಕಾರಿಗಳು
ವಾರ್ಡ್ ಸಂಖ್ಯೆ: 118